1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**1243/2021**

ಹೆಸರುಃ ರಘು ಚಾಸಾಃ 5

ತಂದೆಃ ರಂಗಪ್ಪ ಫ್ರಾಸಾ: 3

ವಯಸ್ಸುಃ 28

ಉದ್ಯೋಗಃ ಕೂಲಿ ಕೆಲಸ

ವಾಸ ಸ್ಥಳಃ ಸಂತೆಬೆನ್ನೂರು ಚನ್ನಗಿರಿ ತಾ.

ಸಾಕ್ಷಿಗೆ ದಿನಾಂಕಃ 16-12-2023 ರಂದು ಪ್ರಮಾಣ ವಚನ ಭೋಧಿಸಲಾಯಿತು

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ಅಮಾನತ್ತು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದಾಖಲೆಯನ್ನು ಈಗಾಗಲೇ ನಿಶಾನೆ ಪಿ 2 ಎಂದು ಗುರುತಿಸಲಾಗಿದ್ದು , ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ಮಹಜರ್ ಸಮಯದಲ್ಲಿ ಪೊಲೀಸರು ಎರಡು ಭಾವಚಿತ್ರ ಗಳನ್ನು ತೆಗೆದಿರುತ್ತಾರೆ. ಸದರಿ ಭಾವಚಿತ್ರಗಳನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ಸದರಿ ಭಾವಚಿತ್ರಗಳನ್ನು ಈಗಾಗಲೇ ನಿಪಿ.3 ಮತ್ತು 4 ಎಂದು ಗುರುತಿಸಲಾಗಿದ್ದು ಪೋಲೀಸರ ಕೋರಿಕೆಯ ಮೇರೆಗೆ ಸದರಿ

ಭಾವಚಿತ್ರಗಳನ್ನು ನಿಂತಿರುತ್ತೇನೆ. ನಾನು ಆರೋಪಿಯನ್ನು ನೋಡಿರುವುದಿಲ್ಲ. ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಮಾನತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಅಮಾನತ್ತು ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 01.12.2020 ರಂದು ಬೆಳ್ಳಿಗನೂಡು ಗ್ರಾಮದ ಕಡೆಗೆ ಹೋಗುವ ಕ್ರಾಸ್ ಬಳಿಯ ಸಂತೆಬೆನ್ನೂರು ದಾವಣಗೆರೆ ರಸ್ತೆಯಲ್ಲಿ ರಾತ್ರಿ 9.30 ಯಿಂದ 10.15 ರ ವರಗೆ ಪೊಲೀಸರು ನನ್ನ ,ಚಾಸಾ 4 ರವರ ಸಮಕ್ಷಮ ನಿ ಪಿ 2 ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ . ನಿಪಿ 2 ನ್ನು ಜರುಗಿಸುವ ಕಾಲಕ್ಕೆ ನನ್ನ ಜೊತೆ ಚಾಸಾ 4 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 2 ನ್ನು ಜರುಗಿಸುವ ಸಮಯದಲ್ಲಿ ಮಾಲುಪಟ್ಟಿ ನಂ.104/2020 ರಲ್ಲಿ ಕಾಲಂ ನಂ.4 ರಲ್ಲಿ ನಮೂದುಪಡಿಸಿರುವ ಕ್ರ.ಸಂ.2 ರಲ್ಲಿರುವ ಮೂರು ವಸ್ತುಗಳನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ . ನಿಪಿ.2 ನ್ನು ಜರುಗಿಸುವ ಸಮಯದಲ್ಲಿ ನಿಪಿ.3 ಮತ್ತು 4 ರಂತೆ ಭಾವಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ01.12.2020 ರಂದು ರಾತ್ರಿ 9.10 ಗಂಟೆಯ ಸಮಯದಲ್ಲಿ ನಾನು ಮತ್ತು ಚಾಸಾ.4 ರವರು ಎ ಕೆ ಕಾಲೋನಿ ಪಕ್ಕದ ಸಂತೆಬೆನ್ನೂರು ದಾವಣಗೆರೆ ರಸ್ತೆಯ

ಬದಿಯಲ್ಲಿ ಇರುವಾಗ ------------ಆರೋಪಿಯನ್ನು ನೋಡಿರುತ್ತೇನೆ. ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಈಗ ಓದಿ ಹೇಳಿ ಕೇಳಿದಂತ ದಿಃ 01.12.2023 ರಂದು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರ ಸರಿಯಲ್ಲ. ಅಲ್ಲಗಳೆದ ಹೇಳಿಕೆಯನ್ನು ನಿಪಿ.5 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

( **ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.**)

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**